**National**
**Kannada**
**23.10.2025 1935 hrs**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಂದ ನಾಳೆ ೧೭ನೇ ರೋಜ್‌ಗಾರ್ ಮೇಳ

2. ಮತಪಟ್ಟಿಗಳ ವಿಶೇಷ ತ್ವರಿತ ಪರಿಷ್ಕರಣೆ ಸಿದ್ಧತೆ ಅಂತಿಮಗೊಳಿಸಲು ರಾಜ್ಯಗಳ ಮುಖ್ಯ ಚುನಾವಣಾಧಿಕಾರಿಗಳಿಗೆ ಚುನಾವಣಾ ಆಯೋಗದ ಸೂಚನೆ

3. ಮಾನವ ರಹಿತ ಗಗನಯಾನ : ವ್ಯೋಮಮಿತ್ರ ಡಿಸೆಂಬರ್ ಮೊದಲ ವಾರದಲ್ಲಿ ಉಡಾವಣೆಗೆ ಸಿದ್ಧ

4. ಅಡಿಲೇಡ್ ಎರಡನೇ ಏಕದಿನ ಕ್ರಿಕೆಟ್ ಪಂದ್ಯ : ಭಾರತ ವಿರುದ್ಧ ಆಸ್ಟ್ರೇಲಿಯಾ ಜಯ

<><><><>

ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ನಾಳೆ ದೇಶಾದ್ಯಂತ ೪೦ ಸ್ಥಳಗಳಲ್ಲಿ ಹದಿನೇಳನೇ ಹಂತದ ರೋಜ್‌ಗಾರ್ ಮೇಳ ನಡೆಯಲಿದೆ. ಈ ವೇಳೆ ೫೧ ಸಾವಿರಕ್ಕೂ ಹೆಚ್ಚು ಅಭ್ಯರ್ಥಿಗಳಿಗೆ ನೇಮಕಾತಿ ಪತ್ರಗಳನ್ನು ವಿತರಿಸಲಾಗುತ್ತದೆ. ತಮಿಳುನಾಡಿನಲ್ಲಿ, ಕೇಂದ್ರ ಮಾಹಿತಿ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ.ಎಲ್.ಮುರುಗನ್ ಅವರು ಚೆನ್ನೈನಲ್ಲಿ ಅಭ್ಯರ್ಥಿಗಳಿಗೆ ನೇಮಕಾತಿ ಪತ್ರಗಳನ್ನು ವಿತರಿಸಲಿದ್ದಾರೆ. ಆಯುಷ್ ಮತ್ತು ಆರೋಗ್ಯ ಹಾಗೂ ಕುಟುಂಬ ಕಲ್ಯಾಣ ಖಾತೆ ರಾಜ್ಯ ಸಚಿವ ಪ್ರತಾಪ್‌ರಾವ್ ಜಾಧವ್ ಅವರು ಮಧುರೈನಲ್ಲಿ ಅಭ್ಯರ್ಥಿಗಳಿಗೆ ನೇಮಕಾತಿ ಪತ್ರಗಳನ್ನು ವಿತರಿಸಲಿದ್ದಾರೆ ಮತ್ತು ಹಣಕಾಸು ಖಾತೆ ರಾಜ್ಯ ಸಚಿವ ಪಂಕಜ್ ಚೌಧರಿ ತಿರುಚಿರಾಪಳ್ಳಿಯಲ್ಲಿ ಅಭ್ಯರ್ಥಿಗಳಿಗೆ ನೇಮಕಾತಿ ಪತ್ರಗಳನ್ನು ವಿತರಿಸಲಿದ್ದಾರೆ. ಬೆಂಗಳೂರಿನಲ್ಲಿ ನಡೆಯಲಿರುವ ಈ ಕಾರ್ಯಕ್ರಮದಲ್ಲಿ ಕೇಂದ್ರ ಉದ್ಯೋಗ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ.

<><><><>

ಶ್ರೀ ನಾರಾಯಣ ಗುರು ಅವರ ಉಪದೇಶಗಳು ಧರ್ಮ, ಜಾತಿ, ವರ್ಗಗಳನ್ನು ಮೀರಿದ್ದಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ಅವರು ಕೇರಳದ ವರ್ಕಾಳದ ಶಿವಗಿರಿ ಮಠದಲ್ಲಿಂದು ಶ್ರೀ ನಾರಾಯಣ ಗುರು ಅವರ ಮಹಾ ಸಮಾಧಿ ಶತಮಾನೋತ್ಸವ ಗೌರವಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಶ್ರೀ ನಾರಾಯಣ ಗುರು ಅವರು, ಸಮಾಜ ಸುಧಾರಕರಾಗಿ ಸಮಾಜದ ದುರ್ಬಲ ವರ್ಗದವರಿಗಾಗಿ ಸಾಕ್ಷರತೆ, ಸ್ವಾವಲಂಬನೆ ಹಾಗೂ ನೈತಿಕ ಮೌಲ್ಯಗಳನ್ನು ಪಸರಿಸಲು ಶ್ರಮಿಸಿದರು. ಅವರ ಸಂದೇಶ ಇಂದಿನ ಜಗತ್ತಿಗೆ ಹೆಚ್ಚು ಪ್ರಸ್ತುತವಾಗಿದೆ ಎಂದು

ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದರು. ಇದೇ ಸಂದರ್ಭದಲ್ಲಿ ಮಹಾ ಸಮಾಧಿಗೆ ಗೌರವ ನಮನ ಸಲ್ಲಿಸಿದರು. ಕೇರಳ ರಾಜ್ಯಪಾಲ ರಾಜೇಂದ್ರ ವಿಶ್ವನಾಥ್ ಅರಳೇಕರ್, ಸಚಿವರಾದ ವಿ.ಎನ್. ವಾಸನ್ ಮತ್ತು ವಿ. ಸಿವನ್ ಕುಟ್ಟಿ, ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ನಂತರ ರಾಷ್ಟ್ರಪತಿಯವರು ಪಾಳದ ಸೆಂಟ್ ಥಾಮಸ್ ಕಾಲೇಜಿನ ಪ್ಲಾಟಿನಮ್ ಮಹೋತ್ಸವದಲ್ಲಿ ಪಾಲ್ಗೊಂಡರು.

<><><><>

ದೇಶದ ಹಡಗು ನಿರ್ಮಾಣ ಮತ್ತು ಸಮುದ್ರ ಪರಿಸರ ವ್ಯವಸ್ಥೆಯನ್ನು ಪುನಶ್ಚೇತನಗೊಳಿಸಲು ೮ ಬಿಲಿಯನ್ ಅಮೆರಿಕನ್ ಡಾಲರ್ ವಿನಿಯೋಗಿಸಲಾಗುತ್ತಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ಇದು ಸಾಮಾನ್ಯ ಮುಂಗಡ ಪತ್ರದ ಮಾರ್ಗವಾಗಿರದೆ ವಿಶೇಷ ಉಪಕ್ರಮದ ಸಂಕೇತವಾಗಿದೆ ಎಂದು ತಿಳಿಸಿದ್ದಾರೆ. ಬಂದರು ಹಾಗೂ ಜಲಮಾರ್ಗ ಖಾತೆ ಸಚಿವ ಸರ್ಬಾನಂದ್ ಸೋನುವಾಲ್ ಪೋಸ್ಟ್ ಮಾಡಿರುವ ಲೇಖನವನ್ನು ಹಂಚಿಕೊಂಡಿರುವ ಪ್ರಧಾನಮಂತ್ರಿಯವರು ಮೇಕಿಂಗ್ ಇಂಡಿಯಾ ಒತ್ತಾಸೆಯೊಂದಿಗೆ ಬಂದರುಗಳನ್ನು ಆಧುನೀಕರಣಗೊಳಿಸಲು ಮಾಡಲಾಗುತ್ತಿರುವ ಸುಸ್ಥಿರ ಕ್ರಮಗಳನ್ನು ಇದು ವಿವರಿಸುತ್ತದೆ ಎಂದು ಹೇಳಿದ್ದಾರೆ. ಮುಂದಿನ ತಲೆಮಾರಿನ ಜಿಎಸ್‌ಟಿ ಸುಧಾರಣೆಗಳು ದೇಶದ ಆರ್ಥಿಕ ವಿಶ್ವಾಸವನ್ನು ಹೇಗೆ ಬಲವರ್ಧಿಸುತ್ತಿವೆ ಎಂಬುದರ ಬಗ್ಗೆಯೂ ಪ್ರಧಾನಮಂತ್ರಿ ನರೇಂದ್ರ ಮೋದಿ ವಿವಿಧ ಸಾಮಾಜಿಕ ಮಾಧ್ಯಮ ಪೋಸ್ಟ್‌ಗಳಲ್ಲಿ ವಿವರಿಸಿದ್ದಾರೆ. ಪ್ರಸ್ತುತ ಹಣಕಾಸು ವರ್ಷದಲ್ಲಿ ಇದುವರೆಗೆ ಭಾರತೀಯ ಆಟೋ ರಫ್ತು ೩೧ ಲಕ್ಷ ೪೦ ಸಾವಿರ ಘಟಕಗಳ ದಾಖಲೆಯನ್ನು ತಲುಪಿದೆ ಎಂದು ಪ್ರಧಾನಿಯವರು ತಿಳಿಸಿದ್ದಾರೆ.

<><><><>

ಪ್ರಧಾನಿ ನರೇಂದ್ರ ಮೋದಿಯವರು ಇದೇ ೨೬ರಂದು ಆರಂಭವಾಗಲಿರುವ ಆಸಿಯಾನ್-ಭಾರತ ಶೃಂಗಸಭೆಯಲ್ಲಿ ವರ್ಚುವಲ್ ಮೂಲಕ ಪಾಲ್ಗೊಳ್ಳಲಿದ್ದಾರೆ. ಆಸಿಯಾನ್ ಅಧ್ಯಕ್ಷರಾಗಿ ಕಾರ್ಯಭಾರ ವಹಿಸಿಕೊಂಡಿರುವ ಮಲೇಷಿಯಾದ ಪ್ರಧಾನಿ ಅನ್ವರ್ ಇಬ್ರಾಹಿಂ ಅವರನ್ನು ಅಭಿನಂದಿಸಿರುವುದಾಗಿ ಪ್ರಧಾನಿ ನರೇಂದ್ರ ಮೋದಿ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ಮುಂಬರುವ ಶೃಂಗಸಭೆಯ ಯಶಸ್ಸಿಗಾಗಿ ಶುಭ ಹಾರೈಸಿರುವ ಪ್ರಧಾನಮಂತ್ರಿಯವರು, ಆಸಿಯಾನ್ ಭಾರತ ಸಮಗ್ರ ಕಾರ್ಯತಂತ್ರ ಸಹಭಾಗಿತ್ವ ಗಾಢಗೊಳ್ಳಲು ಬದ್ಧವಿರುವುದಾಗಿ ತಿಳಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಹಾಗೂ ಆಸಿಯಾನ್ ಧುರೀಣರು, ಆಸಿಯಾನ್-ಭಾರತ ಸಂಬಂಧಗಳಲ್ಲಿ ಉಂಟಾಗಿರುವ ಪ್ರಗತಿ ಬಗ್ಗೆ ಜಂಟಿಯಾಗಿ ಪರಿಶೀಲನೆ ನಡೆಸಲಿದ್ದಾರೆ ಹಾಗೂ ಸಮಗ್ರ ಕಾರ್ಯತಂತ್ರ ಸಹಭಾಗಿತ್ವ ಬಲವರ್ಧಿಸಲು ಕೈಗೊಳ್ಳಬೇಕಾದ ಉಪಕ್ರಮಗಳ ಬಗ್ಗೆ ಚರ್ಚಿಸಲಿದ್ದಾರೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ಭಾರತದ ಪೂರ್ವಕ್ರಿಯಾ ನೀತಿ ಮತ್ತು

ಭಾರತ-ಪೆಸಿಫಿಕ್ ಸಂಬಂಧಗಳ ದೃಷ್ಟಿಯಲ್ಲಿ ಈ ಮಾತುಕತೆ ಮಹತ್ವದ್ದಾಗಿದೆ ಎಂದು ಅದು ತಿಳಿಸಿದೆ. ವಿದೇಶಾಂಗ ವ್ಯವಹಾರಗಳ ಖಾತೆ ಸಚಿವ ಡಾ. ಎಸ್. ಜೈಶಂಕರ್ ಕೌಲಾಲಂಪುರದಲ್ಲಿ ೨೭ರಂದು ನಡೆಯಲಿರುವ ೨೦ನೇ ಪೂರ್ವ ಏಷ್ಯಾ ಶೃಂಗಸಭೆಯಲ್ಲಿ ಪ್ರಧಾನಿಯವರನ್ನು ಪ್ರತಿನಿಧಿಸಲಿದ್ದಾರೆ. ಭಾರತ-ಪೆಸಿಫಿಕ್ ವಲಯದಲ್ಲಿ ಶಾಂತಿ, ಸ್ಥಿರತೆ ಮತ್ತು ಸಮೃದ್ಧಿ ಕುರಿತಾದ ಅವಕಾಶಗಳ ಬಗ್ಗೆ ಚರ್ಚಿಸಲು ಈ ಶೃಂಗಸಭೆ ಪ್ರಮುಖ ವೇದಿಕೆಯಾಗಿದೆ.

<><><><>

ಮತಪಟ್ಟಿಗಳ ವಿಶೇಷ ತ್ವರಿತ ಪರಿಷ್ಕರಣೆಯ ಸಿದ್ಧತೆಗಳನ್ನು ಅಂತಿಮಗೊಳಿಸುವಂತೆ ಕೇಂದ್ರ ಚುನಾವಣಾ ಆಯೋಗ ಎಲ್ಲ ರಾಜ್ಯಗಳ ಮುಖ್ಯ ಚುನಾವಣಾ ಅಧಿಕಾರಿಗಳಿಗೆ ಸೂಚಿಸಿದೆ. ದೆಹಲಿಯಲ್ಲಿಂದು ಮುಕ್ತಾಯಗೊಂಡ ಮುಖ್ಯ ಚುನಾವಣಾ ಅಧಿಕಾರಿಗಳ ಅಧಿವೇಶನದಲ್ಲಿ ಈ ಬಗ್ಗೆ ಸೂಚಿಸಲಾಗಿದೆ. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅಧ್ಯಕ್ಷತೆಯಲ್ಲಿ ನಡೆದ ಈ ಅಧಿವೇಶನದಲ್ಲಿ ಚುನಾವಣಾ ಆಯುಕ್ತರುಗಳಾದ ಡಾ. ಸುಖ್‌ಬೀರ್ ಸಿಂಗ್ ಸಾಂದು ಮತ್ತು ಡಾ. ವಿವೇಕ್ ಜೋಶಿ ಉಪಸ್ಥಿತರಿದ್ದರು. ಸದ್ಯದಲ್ಲೇ ಚುನಾವಣೆ ನಡೆಯಬೇಕಿರುವ ಅಸ್ಸಾಂ, ತಮಿಳುನಾಡು, ಪುದುಚೇರಿ, ಕೇರಳ ಮತ್ತು ಪಶ್ಚಿಮ ಬಂಗಾಳ ರಾಜ್ಯಗಳ ಚುನಾವಣಾ ಅಧಿಕಾರಿಗಳ ಜೊತೆ ಮುಖ್ಯ ಚುನಾವಣಾ ಆಯುಕ್ತರು ಪ್ರತ್ಯೇಕ ಚರ್ಚೆ ನಡೆಸಿದರು.

<><><><>

ಮಾನವ ರಹಿತ ಗಗನಯಾನದ ಪರೀಕ್ಷಾ ಹಾರಾಟದ ಮಿಷನ್-ಜಿ-೧ ಕಾರ್ಯ ಶೇಕಡ ೯೦ರಷ್ಟು ಪೂರ್ತಿಗೊಂಡಿದ್ದು, ಡಿಸೆಂಬರ್ ಮೊದಲ ವಾರದಲ್ಲಿ ವ್ಯೋಮಮಿತ್ರ ಉಡಾವಣೆಗೆ ಸನ್ನದ್ಧವಾಗಿವೆ ಎಂದು ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ - ಇಸ್ರೋ ಅಧ್ಯಕ್ಷ ಡಾ. ವಿ. ನಾರಾಯಣನ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನೌಕೆಯ ಎಸ್ಕೇಪ್ ಸಿಸ್ಟಮ್, ಪ್ಯಾರಾಚೂಟ್ ಮಾಡ್ಯೂಲ್ ಹಾಗೂ ಸಂವಹನ ವ್ಯವಸ್ಥೆಗಳ ಪರೀಕ್ಷೆ ಯಶಸ್ವಿಯಾಗಿದೆ ಎಂದರು.

ಧ್ವನಿ : ಡಾ. ವಿ. ನಾರಾಯಣನ್

ಮಾನವ ಸಹಿತ ಗಗನಯಾನವನ್ನು ೨೦೨೭ರ ವೇಳೆಗೆ ನಿರ್ವಹಿಸುವ ಗುರಿ ಹೊಂದಲಾಗಿದೆ. ಮೂವರು ಭಾರತೀಯ ಗಗನಯಾತ್ರಿಗಳು ಇದರಲ್ಲಿ ಬಾಹ್ಯಾಕಾಶಕ್ಕೆ ಪ್ರಯಾಣಿಸಿ ಸುರಕ್ಷಿತವಾಗಿ ಹಿಂತಿರುಗುವ ಕಾರ್ಯಕ್ರಮವಿದೆ ಎಂದು ಇಸ್ರೋ ಅಧ್ಯಕ್ಷ ನಾರಾಯಣನ್ ತಿಳಿಸಿದರು.

<><><><>

ಬಿಹಾರ ವಿಧಾನಸಭೆ ಮೊದಲ ಹಂತದ ಚುನಾವಣೆ ಪ್ರಚಾರ ಬಿರುಸುಗೊಳ್ಳುತ್ತಿದೆ. ಮುಖ್ಯಮಂತ್ರಿ ನಿತೀಶ್ ಕುಮಾರ್ ಸರನ್ ಜಿಲ್ಲೆಯಲ್ಲಿ ಚುನಾವಣಾ ರ‍್ಯಾಲಿಯಲ್ಲಿ ಪಾಲ್ಗೊಂಡು ಎನ್‌ಡಿಎ ಅಭ್ಯರ್ಥಿ ಪರ ಮತಯಾಚಿಸಿದರು. ಬಿಹಾರ ವಿಧಾನಸಭೆಯ ಚುನಾವಣೆಗಾಗಿ ಮಹಾಘಟಬಂಧನ್, ರಾಷ್ಟ್ರೀಯ ಜನತಾದಳದ ನಾಯಕ ತೇಜಸ್ವಿ ಪ್ರಸಾದ್ ಯಾದವ್ ಅವರನ್ನು ಮುಖ್ಯಮಂತ್ರಿ ಅಭ್ಯರ್ಥಿಯಾಗಿ ಘೋಷಿಸಿದೆ. ಕಾಂಗ್ರೆಸ್ಸಿನ ಚುನಾವಣಾ ನಿರೀಕ್ಷಕ ಹಾಗೂ ರಾಜಸ್ಥಾನದ ಮಾಜಿ ಮುಖ್ಯಮಂತ್ರಿ ಅಶೋಕ ಗೆಹ್ಲೋಟ್ ಪಾಟ್ನಾದಲ್ಲಿಂದು ನಡೆದ ಜಂಟಿ ಸುದ್ದಿಗೋಷ್ಠಿಯಲ್ಲಿ ಈ ವಿಷಯ ಪ್ರಕಟಿಸಿದ್ದಾರೆ. ಮಹಾಘಟಬಂಧನಿನ ಎಲ್ಲ ೭ ಅಂಗ ಪಕ್ಷಗಳ ಹಿರಿಯ ಮುಖಂಡರು ಈ ಸಂದರ್ಭದಲ್ಲಿ ಹಾಜರಿದ್ದರು. ವಿಕಾಸಶೀಲ ಇನ್ಸಾನ್ ಪಾರ್ಟಿಯ ಮುಖೇಶ್ ಸಹಾನಿ ಅವರನ್ನು ಉಪಮುಖ್ಯಮಂತ್ರಿ ಸ್ಥಾನದ ಅಭ್ಯರ್ಥಿಯಾಗಿರುತ್ತಾರೆ ಎಂದು ಅಶೋಕ ಗೆಹ್ಲೋಟ್ ತಿಳಿಸಿದರು. ಈ ಸಂದರ್ಭದಲ್ಲಿ ತೇಜಸ್ವಿ ಪ್ರಸಾದ್ ಯಾದವ್ ಮಾತನಾಡಿ, ಮುಖ್ಯಮಂತ್ರಿ ಅಭ್ಯರ್ಥಿಯಾಗಿ ತಮ್ಮನ್ನು ಪ್ರಕಟಿಸಿರುವುದಕ್ಕೆ ಅಂಗಪಕ್ಷಗಳ ಧುರೀಣರಿಗೆ ಕೃತಜ್ಞತೆ ವ್ಯಕ್ತಪಡಿಸಿದರು. ಬಿಹಾರ್ ವಿಧಾನಸಭಾ ಚುನಾವಣೆ ಘೋಷಣೆಯಾದ ನಂತರ ಮಹಾಘಟಬಂಧನ್‌ನ ಅಂಗಪಕ್ಷಗಳಾದ ರಾಷ್ಟ್ರೀಯ ಜನತಾದಳ, ಕಾಂಗ್ರೆಸ್, ವಿಕಾಸಶೀಲ ಇನ್ಸಾನ್ ಪಾರ್ಟಿ, ಮೂರು ಎಡಪಕ್ಷಗಳು ಹಾಗೂ ಐಐಪಿ ಪಕ್ಷಗಳ ಧುರೀಣರು ಇಂದು ಮೊದಲ ಜಂಟಿ ಸುದ್ದಿಗೋಷ್ಠಿ ನಡೆಸಿದರು ಎಂದು ನಮ್ಮ ಬಿಹಾರ ಬಾತ್ಮಿದಾರರು ವರದಿ ಮಾಡಿದ್ದಾರೆ. ಸಿಪಿಐ-ಎಂಎಲ್ ಪ್ರಧಾನ ಕಾರ್ಯದರ್ಶಿ ದೀಪಂಕರ್ ಭಟ್ಟಾಚಾರ್ಯ ಮಾತನಾಡಿ, ಒಂದು ಸ್ಥಾನಕ್ಕೆ ಹೆಚ್ಚು ಅಭ್ಯರ್ಥಿಗಳು ಸ್ಪರ್ಧಿಸಿರುವ ಕಡೆ ಸಮಸ್ಯೆಗಳನ್ನು ನಿವಾರಿಸಲಾಗುವುದು ಎಂದು ಹೇಳಿದರು. ಹಿರಿಯ ಬಿಜೆಪಿ ನಾಯಕ ಹಾಗೂ ಕೇಂದ್ರ ಸಚಿವ ಗಿರಿಧರ್ ಸಿಂಗ್, ಆರ್‌ಜೆಡಿ ಅಧ್ಯಕ್ಷ ಲಾಲೂಪ್ರಸಾದ್ ಯಾದವ್ ಅವರ ಒತ್ತಡದ ಮೇರೆಗೆ ತೇಜಸ್ವಿ ಪ್ರಸಾದ್ ಯಾದವ್ ಅವರನ್ನು ಮುಖ್ಯಮಂತ್ರಿ ಅಭ್ಯರ್ಥಿಯಾಗಿ ಸೂಚಿಸಲಾಗಿದೆ ಎಂದು ಹೇಳಿದರು.

<><><><>

ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಔರಂಗಾಬಾದ್‌ನ ಗೋಹ್‌ನಲ್ಲಿಂದು ಎನ್‌ಡಿಎ ಅಭ್ಯರ್ಥಿ ಪರವಾಗಿ ಚುನಾವಣಾ ಪ್ರಚಾರ ನಡೆಸಿದರು. ಮಹಾಘಟಬಂಧನ್ ವಿನಾಶದ ಸಂಕೇತವಾಗಿದೆ ಎಂದು ಟೀಕಿಸಿದ ಅವರು, ರಾಷ್ಟ್ರೀಯ ಜನತಾದಳ ಮತ್ತು ಕಾಂಗ್ರೆಸ್ಸಿನ ಆಡಳಿತ ಹೇಗಿತ್ತು ಎಂಬುದನ್ನು ಜನತೆ ಅರಿತಿದ್ದಾರೆ ಎಂದರು. ಎನ್‌ಡಿಎ ಅಭಿವೃದ್ಧಿಯನ್ನು ಪ್ರತಿನಿಧಿಸುತ್ತಿದ್ದು, ಪ್ರಧಾನಿ ನರೇಂದ್ರ ಮೋದಿ ಹಾಗೂ ಮುಖ್ಯಮಂತ್ರಿ ನಿತೀಶ್ ಕುಮಾರ್ ಬಿಹಾರದ ಸಮಗ್ರ ಅಭಿವೃದ್ಧಿಗಾಗಿ ಶ್ರಮಿಸುತ್ತಿದ್ದಾರೆ ಎಂದರು. ಹಿರಿಯ ಬಿಜೆಪಿ ರವಿಶಂಕರ್ ಪ್ರಸಾದ್, ಮಹಾಘಟಬಂಧನ್ ಅತ್ಯಂತ ದುರ್ಬಲ ಮೈತ್ರಿಯಾಗಿದೆ ; ಒಟ್ಟು ೨೪೩ ಸ್ಥಾನಗಳಿಗೆ ಮಹಾಘಟಬಂಧನ್ ಅಂಗಪಕ್ಷಗಳ ೨೫೫

ಅಭ್ಯರ್ಥಿಗಳು  ಸ್ಪರ್ಧಿಸುತ್ತಿದ್ದಾರೆ ಎಂದು ಟೀಕಿಸಿದ್ದಾರೆ. ಮಹಾಘಟಬಂಧನ್‌ನ ಮುಖ್ಯಮಂತ್ರಿ ಅಭ್ಯರ್ಥಿಯಾಗಿ ಘೋಷಿತವಾಗಿರುವ ತೇಜಸ್ವಿ ಯಾದವ್ ವಿರುದ್ಧ ಎಷ್ಟು ಭ್ರಷ್ಟಾಚಾರ ಪ್ರಕರಣಗಳಿವೆ ಎಂಬುದನ್ನು ಸಾರ್ವಜನಿಕರಿಗೆ ತಿಳಿಸಬೇಕೆಂದು ಒತ್ತಾಯಿಸಿದ್ದಾರೆ. ಮತ್ತೊಬ್ಬ ಬಿಜೆಪಿ ನಾಯಕ ಪ್ರತುಲ್ ಶಾ ದೇವ್, ಮಹಾಘಟಬಂಧನ್ ಬಿಹಾರದ ಅಭಿವೃದ್ಧಿಗಾಗಿ ಯಾವುದೇ ಸ್ಥಿರ ಕಾರ್ಯಕ್ರಮಗಳನ್ನು ಹೊಂದಿಲ್ಲ ಎಂದು ರಾಂಚಿಯಲ್ಲಿಂದು ಟೀಕಿಸಿದ್ದಾರೆ.

<><><><>

ಅಡಿಲೇಡ್‌ನಲ್ಲಿ ನಡೆದ ಎರಡನೇ ಏಕದಿನ ಪಂದ್ಯದಲ್ಲಿ ಭಾರತ ವಿರುದ್ಧ ಜಯಗಳಿಸುವ ಮೂಲಕ ಆಸ್ಟ್ರೇಲಿಯಾ ಏಕದಿನ ಪಂದ್ಯ ಸರಣಿಯನ್ನು ಗೆದ್ದುಕೊಂಡಿದೆ. ಇಂದು ನಡೆದ ಪಂದ್ಯದಲ್ಲಿ ಆಸ್ಟ್ರೇಲಿಯಾ ಭಾರತವನ್ನು ೨ ವಿಕೆಟ್‌ಗಳಿಂದ ಪರಾಭವಗೊಳಿಸಿದೆ. ಒಟ್ಟು ೩ ಏಕದಿನ ಪಂದ್ಯಗಳಲ್ಲಿ ಆಸ್ಟ್ರೇಲಿಯಾ ೨ರಲ್ಲಿ ಜಯಗಳಿಸಿದೆ.

<><><><>

ಕೇಂದ್ರ ಗೃಹ ಸಚಿವ ಅಮಿತ್ ಶಾ, ಅಹಮದಾಬಾದಿನ ಸನಂದ್‌ದಲ್ಲಿಂದು ಶಾಂತಿಪುರ-ಖೊರಾಜ್ ನಡುವಿನ ಆರು ಪಥಗಳ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಇಂದು ಗುದ್ದಲಿ ಪೂಜೆ ನೆರವೇರಿಸಿದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>